ಬೆಂಗಳೂರು ದಕ್ಷಿಣ ವಿಶ್ವವಿದ್ಯಾಲಯ ಸ್ಥಾಪನೆ

526 (232) ಶ್ರೀ ರಾಮಲಿಂಗಾರೆಡ್ಡಿ (ಬಿ.ಟಿ.ಎಂ. ಲೇಔಟ್) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹಾಲಿ ಬೆಂಗಳೂರು ವಿಶ್ವವಿದ್ಯಾಲಯದ ವ್ಯಾಪ್ತಿಗೆ ಬರತಕ್ಕ ಕಾಲೇಜುಗಳ ಸಂಖ್ಯೆ ಎಷ್ಟು;

ಆ) ಬೆಂಗಳೂರು ದಕ್ಷಿಣ ವಿಶ್ವವಿದ್ಯಾಲಯವನ್ನು ಪ್ರಾರಂಭಿಸಲು ಸರ್ಕಾರ ಉದ್ದೇಶಿಸಿದೆಯೇ;

ಇ) ಹಾಗಿದ್ದಲ್ಲಿ, ಈ ಉದ್ದೇಶಿತ ದಕ್ಷಿಣ ವಿಶ್ವವಿದ್ಯಾಲಯದ ವ್ಯಾಪ್ತಿಗೆ ಬರತಕ್ಕ ಕಾಲೇಜುಗಳೆಷ್ಟು;

ಈ) ಇದಕ್ಕಾಗಿ ಪ್ರತಿ ವರ್ಷ ತಗಲುವ ವೆಚ್ಚವೆಷ್ಟು;

ಉ) ಈ ರೀತಿ ಹೊಸದಾಗಿ ವಿಶ್ವವಿದ್ಯಾಲಯವನ್ನು ಪ್ರಾರಂಭಿಸಲು ಕೇಂದ್ರ ವಿಶ್ವವಿದ್ಯಾಲಯ ಧನ ಸಹಾಯ ಆಯೋಗ ಒಪ್ಪಿಗೆ ಸೂಚಿಸಿದೆಯೇ?

ಡಾ॥ ವಿ.ಎಸ್. ಆಚಾರ್ಯ (ಉನ್ನತ ಶಿಕ್ಷಣ ಸಚಿವರು) :

ಅ) 640

ಆ) ಇ) ಮತ್ತು ಈ) ಪ್ರಸ್ತಾವನೆಯು ಪರಿಶೀಲನೆಯಲ್ಲಿದೆ.

ಉ) ಹೊಸ ವಿಶ್ವವಿದ್ಯಾಲಯವನ್ನು ಸ್ಥಾಪಿಸಲು ವಿಶ್ವವಿದ್ಯಾಲಯ ಧನ ಸಹಾಯದ ಅನುಮೋದನೆ ಪಡೆಯುವ ಅಗತ್ಯವಿರುವುದಿಲ್ಲ.

ಶ್ರೀರಂಗಪಟ್ಟಣ ತಾಲ್ಲೂಕಿನ ಪಶುವೈದ್ಯಕೀಯ ಆಸ್ಪತ್ರೆ ಪ್ರಾರಂಭ

527 (938) ಶ್ರೀ ರಮೇಶ್ ಬಂಡಿಸಿದ್ದೇಗೌಡ ಎ.ಬಿ. (ಶ್ರೀರಂಗ ಪಟ್ಟಣ) : ಮಾನ್ಯ ಲೋಕಶಿಕ್ಷಣ, ಸಾರ್ವಜನಿಕ ಗ್ರಂಥಾಲಯ, ಸಣ್ಣ ಉಳಿತಾಯ ಹಾಗೂ ಲಾಟರಿ ಮತ್ತು ಪಶುಸಂಗೋಪನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶ್ರೀರಂಗಪಟ್ಟಣ ತಾಲ್ಲೂಕಿನ ಅರೆಕೆರೆ ಗ್ರಾಮದಲ್ಲಿರುವ ಪಶುಚಿಕಿತ್ಸಾಲಯವನ್ನು ಪಶುವೈದ್ಯಕೀಯ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಈ ಪಶು ಚಿಕಿತ್ಸಾಲಯವನ್ನು ಮೇಲ್ದರ್ಜೆಗೇರಿಸಲು ಸರ್ಕಾರ ಅನುದಾನವನ್ನೇನಾದರೂ ನಿಗದಿಪಡಿಸಿದೆಯೆ;